# ಸಂಕಷ್ಟದಲ್ಲಿ ಪುಸ್ತಕೋದ್ಯಮ: ಬೊಮ್ಮಾಯಿ

■ **ವಿಕ ಸುದ್ದಿಲೋಕ** ಬೆಂಗಳೂರು



ಪುಸ್ತಕಗಳಿಗೆ ಸರಕಾರದ ಪ್ರೋತ್ಸಾಹ ಹೆಚ್ಚಾದರೆ ಸಾಹಿತ್ಯದ ಮೌಲ್ಯ ಕಡಿಮೆಯಾಗುತ್ತದೆ. ಕಳಪೆ ಸಾಹಿತ್ಯ ಹೆಚ್ಚಾಗುತ್ತದೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು.

ನಗರದ ಪುರಭವನದಲ್ಲಿ 'ವಿಶ್ವವಾಣಿ' ಪುಸ್ತಕ ಪ್ರಕಾಶನ ವತಿಯಿಂದ ವಿಶ್ವವಾಣಿ ಸಂಪಾದಕ ವಿಶ್ವೇಶ್ವರ ಭಟ್ ಅವರ 'ಸಂಪಾದಕರ ಸದ್ಯಶೋಧನೆ-1-3' ಹಾಗೂ ಕಿರಣ್ ಉಪಾಧ್ಯಾಯ ಅವರ 'ಹೊರ ದೇಶವಾಸಿ', ರೂಪಾ ಗುರುರಾಜ್ ಅವರ 'ಒಂದೊಳ್ಳೆ ಮಾತು – 2', ಶಿಶಿರ್ ಹೆಗಡೆ ಅವರ 'ಶಿಶಿರ ಕಾಲ' ಪುಸ್ತಕಗಳನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.

''ವಿಶ್ವೇಶ್ವರ ಭಟ್ಟರು ಪ್ರತಿದಿನ ಹೊಸದನ್ನು ಹುಡುಕಿ ಜನರಿಗೆ ತಿಳಿಸುತ್ತಾರೆ. ಒಬ್ಬ ಪತ್ರಕರ್ತ ಎಲ್ಲ ರಂಗದವರೊಂದಿಗೆ ಸಂಪರ್ಕ ಹೊಂದಿರದಿದ್ದರೆ, ಜನರ ಮನಸ್ಸಿನಿಂದ ದೂರವಾಗುತ್ತಾನೆ. ಪತ್ರಕರ್ತರು ಮತ್ತು ರಾಜಕಾರಣಿಗಳ ನಡುವೆ ಅವಿನಾಭಾವ ಸಂಬಂಧ ಇದೆ,'' ಎಂದರು.

''ಪುಸ್ತಕ ಉದ್ಯಮ ಯಾವಾಗಲೂ ಸಂಕಷ್ಟದಲ್ಲಿ ಇರುತ್ತದೆ. ಪುಸ್ತಕ ಖರೀದಿಸಿ ಓದುವವರ ಸಂಖ್ಯೆ ಜಾಸ್ತಿ ಆಗುವವರೆಗೆ ಪುಸ್ತಕೋದ್ಯಮ ಸಂಕಷ್ಟದಲ್ಲಿಯೇ ಇರುತ್ತದೆ. ಆದರೆ, ಸರಕಾರದಿಂದ ಸೂಕ್ತ ಪ್ರೋತ್ಸಾಹವೂ ಸಿಗಬೇಕು,'' ಎಂದರು.

ಪತ್ರಕರ್ತ ವಿಶ್ವೇಶ್ವರ ಭಟ್ ಮಾತನಾಡಿ, ''ಕನ್ನಡ ಪುಸ್ತಕ ಲೋಕ ಇಂದು ಬರಡಾಗಿದೆ. ರಾಜ್ಯದಲ್ಲಿ 6 ಕೋಟಿ ಜನಸಂಖ್ಯೆ ಇದ್ದರೂ 6 ಸಾವಿರ ಪುಸ್ತಕಗಳು ಮಾರಾಟವಾಗದೇ ಇರುವುದು ದುರಂತವಾಗಿದೆ. ಈ ವಿಚಾರವನ್ನು ಮಾಜಿ ಸಿಎಂ ಹಾಗೂ ಹಾಲಿ ಸಿಎಂಗೆ ತಿಳಿಸುವ ಉದ್ದೇಶದಿಂದ ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ರಾಜಕಾರಣಿಗಳನ್ನು ಆಹ್ವಾನಿಸಿದೆ,'' ಎಂದು ಸ್ಪಷ್ಟಪಡಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಪ್ರದೀಪ್ ಈಶ್ವರ್, ಕಿರಣ್ ಉಪಾಧ್ಯಾಯ, ರೂಪಾ ಗುರುರಾಜ್ ಹಾಗೂ ಶಿಶಿರ್ ಹೆಗಡೆ, 'ಕನ್ನಡಪ್ರಭ' ಸಂಪಾದಕ ರವಿ ಹೆಗಡೆ, 'ವಿಸ್ತಾರ' ವಾಹಿನಿ ಸಂಪಾದಕ ಹರಿಪ್ರಕಾಶ್ ಕೋಣೆಮನೆ, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಮಹೇಶ್ ಜೋಶಿ ಉಪಸ್ಥಿತರಿದ್ದರು.

ಸದ್ಯಶೋಧನೆ-1, ಸಂಪಾದಕರ ಸದ್ಯಶೋಧನೆ-2, ಸಂಪಾದಕರ ಸದ್ಯಶೋಧನೆ-3 ಪುಸ್ತಕ, ಕಿರಣ್ ಉಪಾಧ್ಯಾಯ ಅವರ 'ಹೊರದೇಶವಾಸಿ', ರೂಪಾ ಗುರುರಾಜ್ ಅವರ 'ಒಂದೊಳ್ಳೆ ಮಾತು-2', ಶಿಶಿರ್ ಹೆಗಡೆ ಅವರ 'ಶಿಶಿರ ಕಾಲ' ಪುಸ್ತಕ ಬಿಡುಗಡೆ ಮಾಡಿದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಚಿಕ್ಕಬಳ್ಳಾಪುರ ಶಾಸಕ, ಪರಿಶ್ರಮ ನೀಟ್ ಅಕಾಡೆಮಿ ಸಂಸ್ಥಾಪಕ ಪ್ರದೀಪ್ ಈಶ್ವರ್ ಜತೆಗಿದ್ದರು.



## ಪುಸ್ತಕ ಮಳಿಗೆ 47, ಬಾರ್, ವೈನ್ ಶಾಪ್ 26000!